ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಗ್ರಾಮ ಪಂಚಾಯಿತಿಯಿಂದ ಮನೆಗಳ ಹಂಚಿಕೆ ಬಗ್ಗೆ.

ಶ್ರೀ ಎಂ. ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

421(531) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಾಸಕನ್ನೊಳಗೊಂಡಂತೆ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸೇರಿ ಪ್ರತಿ ಗ್ರಾಮ ಪಂಚಾಯತ್‌ಗೆ 20 ಮನೆಗಳನ್ನು ಹಂಚಿಕೆ ಮಾಡಲು ವಿಧಾನಸಭಾ ಕ್ಷೇತ್ರವಾರು ಫಲಾನುಭವಿಗಳ ಪಟ್ಟಿಯನ್ನು ತಯಾರಿಸಿ ಜಿಲ್ಲಾ ಪಂಚಾಯತ್‌ಗೆ ಸಲ್ಲಿಸುವಂತೆ ಹಾಸನ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಆದೇಶ ಹೊರಡಿಸಿದ್ದು, ಸದರಿ ಆದೇಶದಂತೆ ಶಾಸಕರ ಅಭಿಪ್ರಾಯ ಪಡೆದು ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರದ ಫಲಾನುಭವಿಗಳ ಪಟ್ಟಿಯನ್ನು ತಯಾರಿಸಲಾಗಿದೆಯೇ;

(ಆ) ತಯಾರಿಸಿದ್ದಲ್ಲಿ, ಶಾಸಕರ ಅಭಿಪ್ರಾಯ ಪಡೆದಿರುವ ದಾಖಲೆಯೊಂದಿಗೆ ಆಯ್ಕೆ ಮಾಡಲಾಗಿರುವ ಫಲಾನುಭವಿಗಳ ಪಟ್ಟಿಯನ್ನು ಪಂಚಾಯಿತಿವಾರು ಮಾಹಿತಿ ನೀಡುವುದು;

(ಇ) ಸರ್ಕಾರದ ಮಾರ್ಗಸೂಚಿಯಂತೆ ಮೀಸಲಾತಿಯ ಮಾನದಂಡವನ್ನು ಅನುಸರಿಸಿ ಈ ಫಲಾನುಭವಿಗಳ ಪಟ್ಟಿಯನ್ನು ತಯಾರಿಸಲಾಗಿದೆಯೇ; ಹಾಗಿದ್ದಲ್ಲಿ, ಮೀಸಲಾತಿಯಂತೆ ಆಯ್ಕೆ ಮಾಡಿರುವ ಫಲಾನುಭವಿಗಳ ಪಟ್ಟಿಯನ್ನು ಒದಗಿಸುವುದು; ಇಲ್ಲವಾದಲ್ಲಿ, ಆಯ್ಕೆ ಮಾಡಿರುವ ಫಲಾನುಭವಿಗಳ ಪಟ್ಟಿಯನ್ನು ಬದಲಾವಣೆ ಮಾಡಲಾಗುವುದೇ; (ಪಂಚಾಯಿತಿವಾರು ಮಾಹಿತಿ ನೀಡುವುದು)

(ಈ) ಈ ಫಲಾನುಭವಿಗಳ ಪಟ್ಟಿಯನ್ನು ಆಯ್ಕೆ ಮಾಡಲು ಗ್ರಾಮ ಪಂಚಾಯಿತಿಗಳಿಗೆ ನೇಮಿಸಿರುವ ಆಡಳಿತಾಧಿಕಾರಿಗಳು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಸಭೆಯನ್ನು ಕರೆಯಬಹುದೇ; ಈ ಫಲಾನುಭವಿಗಳ ಪಟ್ಟಿಯನ್ನು ಗ್ರಾಮ ಸಭೆಯಲ್ಲಿ ಆಯ್ಕೆ ಮಾಡದೆ ಗ್ರಾಮ ಪಂಚಾಯಿತಿಗಳಿಗೆ ನೇಮಿಸಿರುವ ಆಡಳಿತಾಧಿಕಾರಿಗಳು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಅನುಮೋದಿಸಬಹುದೇ? (ವಿವರ ನೀಡುವುದು)